ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ನಾನು 2011ನೇ ಸಾಲಿನ **ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು** ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ (ಅನುಬಂಧ- VI)

ಈ ಸಂದರ್ಭದಲ್ಲಿ ಸದನದ ಭಾವಿಯಲ್ಲಿ ವಿರೋಧ ಪಕ್ಷದವರು ಘೋಷಣೆ ಕೂಗುತ್ತಿದ್ದರು.)

5. ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ 2011

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): (ಸಣ್ಣ ನೀರಾವರಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆಯನ್ನು ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

"2011ನೇ ಸಾಲಿನ ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು".

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, ನಾನು 2011ನೇ ಸಾಲಿನ **ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು** ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ (ಅನುಬಂಧ– VII)

ಈ ಸಂದರ್ಭದಲ್ಲಿ ಸದನದ ಭಾವಿಯಲ್ಲಿ ವಿರೋಧ ಪಕ್ಷದವರು ಘೋಷಣೆ ಕೂಗುತ್ತಿದ್ದರು.)

(ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

1. ಕರ್ನಾಟಕ ಧನ ವಿನಿಯೋಗ ವಿಧೇಯಕ 2011.

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

"2011ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಸಭೆಯು ಪರ್ಯಾಲೋಚಿಸುತ್ತದೆ" ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.